**ಸಾಕ್ಷಿಗೆ ದಿನಾಂಕ 09.10.2025 ರಂದು ಪ್ರಮಾಣ ವಚನ ನೀಡಲಾಯಿತು.**

**ಮುಂದುವರೆದ ಪಾಟೀಸವಾಲುಃ ಪ್ರತಿವಾದಿ ಪರ ಶ್ರೀ ವಕೀಲರಿಂದಃ**

ಸಾಕ್ಷಿಗೆ ತನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಡಿ-9 ಎಂದು ಗುರುತಿಸಲಾಯಿತು. ಸಿಮಿಸ್ 240/2021 ರ ಆದೇಶದಂತೆ ನಾನು ನನ್ನ ತಂದೆಯ ಮರಣ ಪ್ರಮಾಣ ಪತ್ರವನ್ನು ಪಡೆದುಕೊಂಡಿಲ್ಲ. ಸಾಕ್ಷಿಗೆ ಮೇಲ್ಮನವಿಯ ಅರ್ಜಿಯ ದೃಢೀಕೃತ ಅರ್ಜಿಯನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಡಿ-10 ಎಂದು ಗುರುತಿಸಲಾಯಿತು. ಸಾಕ್ಷಿಗೆ ಆರ್.ಎ 62/2018 ರಲ್ಲಿ ಸಲ್ಲಿಸಿದ ತಕರಾರಿನ ದೃಢೀಕೃತ ನಕಲನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಡಿ-11 ಎಂದು ಗುರುತಿಸಲಾಯಿತು. ಸಾಕ್ಷಿಗೆ ಆರ್.ಎ 62/2018 ರಲ್ಲಿ ಆದೇಶದ ದೃಢೀಕೃತ ನಕಲನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಡಿ-12 ಎಂದು ಗುರುತಿಸಲಾಯಿತು. ನಿಡಿ-12 ರಲ್ಲಿ ನಮೂದಿಸಿರುವ ಮರಮ್ಮ ನನ್ನ ಅಕ್ಕನಾಗಬೇಕು ಅವರು ತೀರಿಕೊಂಡಿರುತ್ತಾರೆ. ನನ್ನ ಅಕ್ಕನ ವಾರಸುದಾರರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿಲ್ಲ.

ನಿಪಿ-1 ರ ವಂಶವೃಕ್ಷದಂತೆ ವಾದ ಪತ್ರದಲ್ಲಿ ನಾನು ಸಂಬಂಧದ ಬಗ್ಗೆ ಹೇಳಿ ಬರೆಸಿಲ್ಲ. ನಿಪಿ-1 ರಲ್ಲಿ ದೊಡ್ಡಬಸ್ಸಯ್ಯರವರ ಮಗ ಮರಯ್ಯ ಎಂದು ಹೇಳಿ ಬರೆಸಿಲ್ಲ. ಸಾಕ್ಷಿ ನಿಪಿ-1 ರಲ್ಲಿ ತಪ್ಪಾಗಿದೆ ಎಂದು ನುಡಿಯುತ್ತಾರೆ. ನನ್ನ ತಂದೆಯನ್ನು ಮರಯ್ಯ @ ಮರಿಯಯ್ಯ ಎಂದು ಕರೆಯುತ್ತಿದ್ದರು ಎಂದು ವಾದ ಪತ್ರದಲ್ಲಿ ಹೇಳಿ ಬರೆಸಿಲ್ಲ. ಬಸವಯ್ಯನ ಮಗ ಮರಿಯಯ್ಯ ಎಂದು ವಂಶವೃಕ್ಷದಲ್ಲಾಗಲಿ ವಾದ ಪತ್ರದಲ್ಲಾಗಲಿ ಹೇಳಿ ಬರೆಸಿಲ್ಲ. ನಿಪಿ-2 ರ ಪ್ರಕಾರ ಜಂಟಿ ಖಾತೆ ಇದೆ ಎಂದರೆ ಸರಿ. ನಿಪಿ-2 ರ ಸ್ವಾಧೀನದಾರರನ್ನು ಈ ದಾವೆಯಲ್ಲಿ ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ನಿಪಿ-2 ಹಾಗೂ 3 ರಲ್ಲಿರುವ ಸ್ವಾಧೀನದಾರರು ತೀರಕೊಂಡಿರುತ್ತಾರೆ ಎಂದರೆ ಸರಿ. ವಾರಸುದಾರರನ್ನು ಪಕ್ಷಗಾರರನ್ನಾಗಿ ಮಾಡಿಲ್ಲ ಎಂದರೆ ಸರಿ. ದಾವಾ ಸ್ವತ್ತುಗಳು ನನಗಾಗಲಿ ನನ್ನ ತಂದೆಗಾಗಲಿ ವಿಭಾಗದ ಮೂಲಕ ಬಂದಿರುತ್ತದೆ ಎಂದು ತೋರಿಸಲು ದಾಖಲೆಗಳನ್ನು ಹಾಜರುಪಡಿಸಿಲ್ಲ ಎಂದರೆ ಸರಿ. ದಾವಾ ಸ್ವತ್ತಿನಲ್ಲಿ ನಾನು ಮಾಲೀಕನೆಂದು ತೋರಿಸಲು ಯಾವುದೇ ದಾಖಲೆಯನ್ನು ಹಾಜರುಪಡಿಸಿಲ್ಲ ಎಂದರೆ ಸರಿ ಸಾಕ್ಷಿ ಜಂಟಿ ಖಾತೆ ಇದೆ ಎಂದು ನುಡಿಯುತ್ತಾರೆ. ದಾವಾ ಐಟಂ ನಂಬರ-1 ರಲ್ಲಿ ನನಗೆ ಯಾವುದೇ ಹಕ್ಕು ಹಿತಾಸಕ್ತಿ ಇಲ್ಲ ಎಂದರೆ ಸರಿಯಲ್ಲ. ಸಾಕ್ಷಿ ದಾವಾ ಜಮೀನು ನನ್ನ ಭಾಗಕ್ಕೆ ಬರಬೇಕು ಎಂದು ದಾವೆ ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ.

ದಾವಾ ಐಟಂ ನಂಬರ-2 ಕ್ಕೆ ಸಂಬಂಧಿಸಿದಂತೆ ನನ್ನ ಅಕ್ಕ ಮರಮ್ಮ ಮಾನ್ಯ ಉಪವಿಭಾಗಾಧಿಕಾರಿಗಳಿಗೆ ಅರ್ಜಿ ಸಲ್ಲಿಸಿದ್ದರು ಎಂದರೆ ಸರಿ. ಪ್ರತಿವಾದಿಯ ತಾಯಿ ಸದರಿ ಅರ್ಜಿಗೆ ತಕರಾರು ಸಲ್ಲಿಸಿದ್ದರು ಎಂದರೆ ಸರಿ. ನನ್ನ ಅಕ್ಕ ಸಲ್ಲಿಸಿದ ಅರ್ಜಿ ವಜಾ ಆಗಿಗೊಂಡಿರುತ್ತದೆ ಎಂದರೆ ಸರಿ. ಸಾಕ್ಷಿಗೆ ಸದರಿ ಆದೇಶದ ದೃಢೀಕೃತ ಅರ್ಜಿಯನ್ನು ತೋರಿಸಲಾಗಿ ಸಾಕ್ಷಿ ನೋಡಿ ಗುರುತಿಸಿದ್ದು ಅದನ್ನು ನಿಡಿ-13 ಎಂದು ಗುರುತಿಸಲಾಯಿತು. ಸದರಿ ಆದೇಶವನ್ನು ಪ್ರಶ್ನಿಸಿ ನಾನು ಹಾಗೂ ನನ್ನ ಅಕ್ಕ ಮೇಲ್ಮನವಿ ಸಲ್ಲಿಸಿದ್ದೇವು ಎಂದರೆ ಸರಿ. ಉಪವಿಭಾಗಾಧಿಕಾರಿಗಳ ಆದೇಶದ ಮೇರೆಗೆ ಪಹಣಿ ಪತ್ರಿಕೆಯಲ್ಲಿ ಈರಯ್ಯರವರ ಹೆಸರಿಗೆ ತಿದ್ದುಪಡಿ ಆಗಿದೆ ಎಂದರೆ ಸರಿಯಲ್ಲ. ದಾವಾ ಸ್ವತಿನಲ್ಲಿ ನನಗೆ ಯಾವುದೇ ಹಕ್ಕು ಇಲ್ಲ ಎಂದರೆ ಸರಿಯಲ್ಲ. ದಾವಾ ಸ್ವತ್ತಿನಲ್ಲಿ ನನಗೆ ಯಾವುದೇ ಮಾಲೀಕತ್ವ ಹಾಗೂ ಸ್ವಾಧೀನತೆ ಇಲ್ಲ ದಾವೆಯಲ್ಲಿ ಕೋರಿರುವ ಪರಿಹಾರಕ್ಕೆ ನಾನು ಅರ್ಹನಲ್ಲ ಎಂದರೆ ಸರಿಯಲ್ಲ. ಸುಳ್ಳು

ಮಾಹಿತಿಯನ್ನು ನೀಡಿ ತಂದೆಯ ಹೆಸರನ್ನು ಬದಲಾವಣೆ ಮಾಡಿ ಸುಳ್ಳು ಆದೇಶವನ್ನು ಪಡೆದುಕೊಂಡಿರುತ್ತೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇರುವುದಿಲ್ಲ.**

**ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.**

**ಓ.ಹೇ.ಕೇ.ಸರಿ ಇದೆ.**

**ಪ್ರಧಾನ ಸಿವಿಲ್ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಧೀಶರು, ಹುಣಸೂರು.**